# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ಕೋಡಾಲು ಮತ್ತು ಇತರೆ 28 ಜನವಸತಿಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಹೆಚ್ಚುವರಿಯಾಗಿ 4 ಜನವಸತಿ (**ಸುಶೀಲನಗರ, ಸಿದ್ದಾಪುರ, ಜೈಸಿಂಗಾಪುರ ಮತ್ತು ವೆಂಕಟಗಿರಿ**) ಗಳನ್ನು ಸೇರ್ಪಡಿಸಿರುವ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂ:ಗ್ರಾಕುನೀ&ನೈಇ/40/ಗ್ರಾನೀಸ(4)2021 ದಿನಾಂಕ:20.02.2021.
2. ದಿನಾಂಕ:29.09.2021ರಂದು ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ Variations & EOT ಮಂಜೂರು ಮಾಡುವ ಕುರಿತು ನಡೆದ ಸಭೆಯ ನಡವಳಿಗಳು.
3. ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ ಇಲಾಖೆರವರ ಕಡತ ಸಂ:ಗ್ರಾಕುನೀ&ನೈ/96/ಮುಇಂ/ತಾಂತ್ರಿಕ/2019.

---

**ಪೀಠಿಕೆ:**

ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ಕೋಡಾಲು ಮತ್ತು ಇತರೆ 28 ಜನವಸತಿಗಳಿಗೆ ಸುರಕ್ಷಿತ ಹಾಗೂ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆಯ ಅಂದಾಜಿಗೆ ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ ರೂ.7965.00ಲಕ್ಷಗಳಿಗೆ (5 ವರ್ಷಗಳ O&M ಮೊತ್ತ ಸೇರಿದಂತೆ) ಪರಿಷ್ಕೃತ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಪ್ರಸ್ತುತ ಯೋಜನೆಯಲ್ಲಿ ಹೆಚ್ಚುವರಿಯಾಗಿ ಸೇರ್ಪಡೆಯಾಗಿರುವ 4 ಜನವಸತಿಗಳಾದ **ಸುಶೀಲನಗರ, ಸಿದ್ದಾಪುರ, ಜೈಸಿಂಗಾಪುರ ಮತ್ತು ವೆಂಕಟಗಿರಿ ಜನವಸತಿಗಳನ್ನು** ನಿಡಗುರ್ತಿ ಮತ್ತು ಇತರೆ 62 ಜನವಸತಿಗಳ ಯೋಜನೆಯಲ್ಲಿ ಸೇರಿಸಲಾಗಿತ್ತು. ಆದರೆ ನಿಡಗುರ್ತಿ ಯೋಜನೆಗೆ ನೀರಿನ ಮೂಲದಲ್ಲಿ ಬದಲಾವಣೆಯಾಗಿದ್ದು, ಸದರಿ 4 ಜನವಸತಿಗಳು ತುಂಬಾ ದೂರದಲ್ಲಿರುವುದರಿಂದ ನೀರು ಸರಬರಾಜು ಮಾಡಲು ಸಾಧ್ಯವಾಗದ ಕಾರಣ, ನಿಡಗುರ್ತಿ ಯೋಜನೆಯಿಂದ ಕೈ ಬಿಡಲಾಗಿದ್ದು, ಕೋಡಾಲು ಮತ್ತು ಇತರೆ 28 ಜನವಸತಿಗಳ ಯೋಜನೆಯಲ್ಲಿ ಸೇರ್ಪಡಿಸಿ, 4 ಜನವಸತಿಗಳಿಗೆ ನೀರು ಸರಬರಾಜು ಮಾಡಲು ದಿನಾಂಕ:29.09.2021ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಟೆಂಡರ್ ಕಾಮಗಾರಿಗಳ Variation in tender items and in new items & EOT ಪ್ರಾಧಿಕಾರ ಸಭೆಯ ನಿರ್ಣಯದ ಮೇಲೆ ಓದಲಾದ (3)ರ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತದಲ್ಲಿ ಪರಿಷ್ಕೃತ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ.

ಸದರಿ ಯೋಜನೆಯಲ್ಲಿ ಹೆಚ್ಚುವರಿ 4 ಜನವಸತಿಗಳನ್ನು ಸೇರ್ಪಡಿಸಿರುವುದರಿಂದ ಯೋಜನೆಯ ಅಂದಾಜಿನಲ್ಲಿ ಪ್ರೈಸ್ ಎಸ್ಕ್ಲೇಶನ್, ಕಾರ್ಯಾಚರಣೆ ಮತ್ತು ನಿರ್ವಹಣಾ ವೆಚ್ಚ, PMC ವೆಚ್ಚ, ವಿದ್ಯುತ್ ವೆಚ್ಚ, ಮತ್ತು ಪ್ರಸ್ತುತ SR ದರಗಳ ಹೆಚ್ಚಳದಿಂದ ಈ ಯೋಜನೆಯ ಅಂದಾಜು ಮೊತ್ತದಲ್ಲಿ ಹೆಚ್ಚಳವಾಗಿದ್ದು, **ರೂ.8964.00ಲಕ್ಷಗಳಿಗೆ** ಪರಿಷ್ಕೃತವಾಗಿದೆ. ಆದ್ದರಿಂದ ಸದರಿ ಯೋಜನೆಗೆ ಮೇಲೆ ಓದಲಾದ (2)ರ ಸಭೆಯ ನಡವಳಿಯಂತೆ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿರುತ್ತದೆ.

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, **ಬಳ್ಳಾರಿ** ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರು ರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ **ಜಲ ಜೀವನ ಮಿಷನ್ (JJM)** ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/104/ಗ್ರಾನೀಸ(4)2022, ಬೆಂಗಳೂರು, ದಿನಾಂಕ:19.02.2022.** 262

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ಕೋಡಾಲು ಮತ್ತು ಇತರೆ 28 ಜನವಸತಿಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಹೆಚ್ಚುವರಿಯಾಗಿ **4** ಜನವಸತಿ **(ಸುಶೀಲನಗರ, ಸಿದ್ದಾಪುರ, ಜೈಸಿಂಗಾಪುರ ಮತ್ತು ವೆಂಕಟಗಿರಿ)** ಗಳನ್ನು ಸೇರ್ಪಡಿಸಿರುವ ಪರಿಷ್ಕೃತ ಅಂದಾಜು ಮೊತ್ತ **ರೂ.8964.00ಲಕ್ಷ (ಎಂಟು ಸಾವಿರದ ಒಂಭೈನೂರ ಅರವತ್ತಾಲ್ಕು ಲಕ್ಷ ರೂಪಾಯಿಗಳು ಮಾತ್ರ)** ಗಳಿಗೆ **5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ (O&M)** ಬಾಬ್ತು ಸೇರಿದಂತೆ ಪರಿಷ್ಕೃತ ಅಂದಾಜು ಮೊತ್ತದಲ್ಲಿ ಕಾರ್ಯಗತಗೊಳಿಸುವ ಸಂಬಂಧ 2215-ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ (2215-MVS) ಕಾರ್ಯಕ್ರಮದ ಅಡಿಯಲ್ಲಿ **ಆಡಳಿತಾತ್ಮಕ** ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ

**2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ:**

(a) ಈ ಅನುಮೋದಿತ ಕುಡಿಯುವ ನೀರಿನ ಯೋಜನೆಯ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

b) ಈ ಯೋಜನೆಯ **DBOT** ಟೆಂಡರ್‌ನ್ನು KTPP ಪಾರದರ್ಶಕ ನಿಯಮಗಳನ್ನು ಅನುಸರಿಸಿ ಅದರಂತೆ ಕ್ರಮವಹಿಸತಕ್ಕದ್ದು.

c) ಟೆಂಡರ್ ಅವಾರ್ಡ್ ಮಾಡುವ ಮೊದಲು ಅಗತ್ಯವಿರುವ ಅನುದಾನವನ್ನು ಲಭ್ಯತೆ ಮಾಡಿಕೊಂಡು ಕ್ರಿಯಾ ಯೋಜನೆಯಲ್ಲಿ ಅಳವಡಿಸಿದ ನಂತರ ನಿಯಮಾನುಸಾರ ಮುಂದಿನ ಕ್ರಮವಹಿಸುವುದು.

d) ಈ ಯೋಜನೆಯ ಅನುಷ್ಠಾನ ಮತ್ತು ಅನುದಾನ ವಿನಿಯೋಗದಲ್ಲಿ ಅನುಮೋದಿತ ಟೆಂಡರ್ ಮೊತ್ತ ಮೀರಿ ಹೆಚ್ಚಳವಾಗದಂತೆ ಅನುಷ್ಠಾನ ಅಧಿಕಾರಿಗಳು ನಿಗಾವಹಿಸಿ ಪ್ರಚಲಿತ ನಿಯಮಗಳನುಸಾರ ಅಗತ್ಯವಿರುವ ನಿಬಂಧನೆಗಳನ್ನು ಅಳವಡಿಸಿಕೊಂಡು ಸೂಕ್ತ ರೀತಿಯಲ್ಲಿ ಒಡಂಬಡಿಕೆ- ಕರಾರುಗಳನ್ನು ಮಾಡಿಕೊಳ್ಳತಕ್ಕದ್ದು.

e) ಯಶಸ್ವಿ ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಹಾಗೂ ಕಾರ್ಯಾಚರಣೆ ಜವಾಬ್ದಾರಿಯನ್ನು ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

f) ಯೋಜನಾ ವ್ಯಾಪ್ತಿಯ ಜನವಸತಿಗಳಿಗೆ 85 LPCD ನೀರನ್ನು ಒದಗಿಸುವುದು. ಯಾವುದೇ ಕಾರಣಕ್ಕೂ ಅನುಮೋದಿತ ಯೋಜನಾ ಅಂದಾಜು ವೆಚ್ಚದಲ್ಲಿ ಹೆಚ್ಚಳವಾದಲ್ಲಿ ಗುತ್ತಿಗೆದಾರರೇ ಅಂತಹ ಹೆಚ್ಚಳ ಭರಿಸತಕ್ಕದ್ದು.

g) ಗುತ್ತಿಗೆದಾರರು ಸಿದ್ಧಪಡಿಸುವ ಡಿ.ಪಿ.ಆರ್‌ಗೆ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಹಂತದಲ್ಲಿರುವ **DBOT** ತಾಂತ್ರಿಕ ಸಮಿತಿ, ತಾಂತ್ರಿಕ ಸಿಂಧುತ್ವವನ್ನು ಪರಿಶೀಲಿಸಿ ದೃಢೀಕರಿಸಬೇಕು. ಹೀಗೆ ದೃಢೀಕರಿಸುವಾಗ ವಾಸ್ತವಿಕವಾಗಿ ಅಗತ್ಯವಿರುವ ಪ್ರಮಾಣದ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಗೆ ಅಗತ್ಯವಿರುವ ಎಲ್ಲಾ ತಾಂತ್ರಿಕ ವಿನ್ಯಾಸಗಳು ಮತ್ತು ಕಾಮಗಾರಿಗಳು ಪೂರಕವಾಗಿರುವುದನ್ನು ದೃಢಪಡಿಸಿಕೊಳ್ಳಬೇಕು.

h) ಈ ಯೋಜನೆಯ ಕಾಮಗಾರಿಯನ್ನು 24 ತಿಂಗಳ ಕಾಲಮಿತಿಯೊಳಗೆ ಅನುಷ್ಠಾನಗೊಳಿಸತಕ್ಕದ್ದು. ಯಾವುದೇ ವಿಳಂಬಕ್ಕೆ ಅವಕಾಶ ನೀಡಬಾರದು. ಯೋಜನೆಯ ಘಟಕದಲ್ಲಿನ ಸಾಮಗ್ರಿಗಳ ಬೆಲೆ ಹೆಚ್ಚಳಕ್ಕೆ ಅವಕಾಶವಿರುವುದಿಲ್ಲ. ಬಲ್ಕ್‌ವಾಟರ್ ಮೀಟರ್‌ಗಳನ್ನು ಎಲ್ಲಾ ಜನವಸತಿಗಳ OHT ಬಳಿ ಅಳವಡಿಸತಕ್ಕದ್ದು.

i) ಈ ಯೋಜನೆಯ ಮುಖ್ಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ ನಂತರ, ಅವುಗಳ ಗುಣಮಟ್ಟ ಮತ್ತು ಕಾರ್ಯಕ್ಷಮತೆ ಮತ್ತು **PMC** ವರದಿ ಆಧರಿಸಿ ಅನುಮೋದಿತ **ToR** ಹಾಗೂ ಟೆಂಡರ್ ಕರಾರಿನಂತೆ ನಿಯಮಾನುಸಾರ ಬಿಲ್ ಪಾವತಿಸಲು ಅನುಷ್ಠಾನಾಧಿಕಾರಿಗಳು ಹಾಗೂ ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ ಇಲಾಖೆ ಕ್ರಮವಹಿಸಬೇಕು. ಕಾಮಗಾರಿಯ ಕಾಲಕಾಲಿಕ ಪ್ರಗತಿ ಮತ್ತು ಗುಣಮಟ್ಟ ಪರಿಶೀಲಿಸಿ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ವರದಿ ಮಾಡತಕ್ಕದ್ದು.

j) ಈ ಯೋಜನೆಯ ವಿನ್ಯಾಸದ ಕಾರ್ಯಸಿಂಧುತ್ವ ಪರಿಶೀಲಿಸುವುದು, ಕಾಲಮಿತಿಯೊಳಗೆ ಯೋಜನೆ ಅನುಷ್ಠಾನಗೊಳಿಸುವುದು ಮತ್ತು ಯೋಜನೆಯ ಕಾಮಗಾರಿಗಳ ಗುಣಮಟ್ಟ ಪರಿವೀಕ್ಷಣೆ ಸಲುವಾಗಿ ಅಗತ್ಯವಿರುವ ಯೋಜನಾ ಉಸ್ತುವಾರಿ ಘಟಕವನ್ನು ಟೆಂಡರ್ ಮುಖೇನ ಗೊತ್ತುಪಡಿಸಿ, ಸರ್ಕಾರದ ಅನುಮೋದನೆ ಪಡೆಯಲು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಜರೂರಾಗಿ ಕ್ರಮವಹಿಸತಕ್ಕದ್ದು.

k) ಮೇಲ್ಕಂಡ ಅನುಮೋದಿತ ಮೊತ್ತ **DBOT** ತಾಂತ್ರಿಕ ಸಮಿತಿ ದೃಢೀಕರಿಸುವ ಯೋಜನೆಯ ಮುಖ್ಯ ಕಾಮಗಾರಿಗಳ ವಾಸ್ತವಿಕ ಅಂದಾಜು ಮೊತ್ತದ ನಿಬಂಧನೆಗೊಳಪಟ್ಟಿರುತ್ತದೆ. ಅಂತೆಯೇ, ಅನುಮೋದಿತ ಸಂಸ್ಥೆಯೊಡನೆ **MoU**/ಕರಾರು ಪತ್ರ ಮಾಡಿಕೊಳ್ಳುವ ಮೊದಲು ಗರಿಷ್ಠ ಮಿತವ್ಯಯ ಅಳವಡಿಸಿ, ಸರ್ಕಾರದ ಅನುಮತಿ ಪಡೆದು ಯೋಜನೆಯ ಅನುಷ್ಠಾನ ಕುರಿತು ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮುಂದಿನ ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ (ಅಭಿವೃದ್ಧಿ),
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಬಳ್ಳಾರಿ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಆಯುಕ್ತರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
7. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.

8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಬಳ್ಳಾರಿ.**
10. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಕಲಬುರಗಿ.**
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಸಂಪಾದಕರು "ಕರ್ನಾಟಕ ವಿಕಾಸ", ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಬಳ್ಳಾರಿ.**
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು) ಬೆಂಗಳೂರು.
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ) ಬೆಂಗಳೂರು.
17. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು) ಬೆಂಗಳೂರು.
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.